# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164//2021-22 ದಿನಾಂಕ: 29-03-2022

### ವಾರ್ಡ್ ಸಮಿತಿ ಸಭೆಯ ನಡಾವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ:21-09-2020ರ ಆದೇಶದಂತೆ ದಿನಾಂಕ: 28-03-2022 ಸೋಮವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಮಾರ್ಚ್ ತಿಂಗಳ ಮೊದಲ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 3 | ಡಾ॥ ಹರ್ಷಿತ | ವೈದ್ಯಾಧಿಕಾರಿ (ವಿದ್ಯಾಪೀಠ ಆರೋಗ್ಯ ಕೇಂದ್ರ) |
| 4 | ಡಾ॥ ಸಾವಂತ್ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಮುನಿರಾಜು | ಸಹಾಯಕ ಅಭಿಯಂತರರು ಡಬ್ಲ್ಯೂ-08 (ಬೆಸ್ಕಾಂ) |
| 8 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 9 | ಶ್ರೀ ಪ್ರಜ್ವಲ್ | ಮಾರ್ಷಲ್ |
| 10 | ಶ್ರೀ ಯತಿರಾಜ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 11 | ಶ್ರೀ ತಿರುಮಲಯ್ಯ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 12 | ಶ್ರೀ ರಾಧಕೃಷ್ಣ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 13 | ಶ್ರೀ ದುರ್ಗಾ ಪ್ರಸಾದ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 14 | ಶ್ರೀ ಕುಮಾರ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಸಭೆಯಲ್ಲಿ ಹಾಜರಿದ್ದ ವಾರ್ಡ್ ಸೂಪರ್‌ವೈಸರ್ ರವರು ಬೇಸಿಗೆ ಕಾಲವಾದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಮರಗಳಿಂದ ಎಲೆಗಳು ಉದುರುತ್ತಿದ್ದು, ಉದುರಿದ ಎಲೆಗಳನ್ನು ಸಂಗ್ರಹಿಸಿ ವಿಲೇವಾರಿ ಮಾಡಲು ಎರಡು ಪಾಳಿಯಲ್ಲಿ ಕೆಲಸ ಮಾಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ.

2. ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಸರಿಸುಮಾರು 3500 ರಷ್ಟು ಲಸಿಕೆಯನ್ನು ಹಾಕಲಾಗುತ್ತಿದ್ದು, ಇದರಲ್ಲಿ 1ನೇ ಮತ್ತು 2ನೇ ಡೋಸ್, ಬೂಸ್ಟರ್ ಡೋಸ್ ಹಾಗೂ 15 ವರ್ಷದ ಮೇಲ್ಪಟ್ಟ ವಯಸ್ಕರಿಗೆ ನೀಡುತ್ತಿರುವ ಲಸಿಕೆಯು ಸೇರಿರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ಕಳೆದ ಮಾಹೆಯಲ್ಲಿ 2500 ಕೋವಿಡ್ ಪರೀಕ್ಷೆಯನ್ನು ನಡೆಸಲಾಗಿದ್ದು, ಅದರಲ್ಲಿ 150 ರಷ್ಟು ಕೋವಿಡ್ ಪಾಸಿಟಿವ್ ಕೇಸ್‌ಗಳು ವರದಿಯಾಗಿರುತ್ತದೆ ಎಂದು ತಿಳಿಸಿರುತ್ತಾರೆ ಹಾಗೂ ಯಾವುದೇ ಓಮಿಕ್ರೋನ್ ಪ್ರಕರಣಗಳು ವರದಿಯಾಗಿರುವುದಿಲ್ಲ ಎಂದು ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳು ತಿಳಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನವನ್ನು ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ. ವಾರ್ಡ್ ವ್ಯಾಪ್ತಿಯಲ್ಲಿ ಫೆಬ್ರವರಿ ಮಾಹೆಯಲ್ಲಿ ಒಟ್ಟು 18.33 ಲಕ್ಷ ಕಂದಾಯ ವಸೂಲಿ ಮಾಡಿದ್ದು, ರೂ: 38.74 ಲಕ್ಷದಷ್ಟು ಬಾಕಿ ಇದ್ದು, ಅದನ್ನು ಸಂಗ್ರಹಿಸಲು ಕ್ರಮಕೈಗೊಳ್ಳುತ್ತಿರುವುದಾಗಿ ಸಭೆಗೆ ತಿಳಿಸಿರುತ್ತಾರೆ.

4. ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫಾರ್ಮರ್‌ಗಳು ಹಾಳಾಗಿರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಹಾಗೂ ಅಂರ್ಜಾಲ ಕೇಬಲ್ ಅಳವಡಿಸಲು ಅನುಮತಿಗಾಗಿ ಪತ್ರ ಬರೆದಿರುವುದಾಗಿ ಸಭೆಗೆ ತಿಳಿಸಿರುತ್ತಾರೆ. ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ 25 ವರ್ಷಗಳಷ್ಟು ಹಳೆಯದಾದ ಕೇಬಲ್‌ಗಳನ್ನು ಬದಲಾವಣೆ ಮಾಡುತ್ತಿದ್ದು, ಶೇ 50% ರಷ್ಟು ಕೆಲಸ ಮುಗಿದಿರುತ್ತದೆ. ಉಳಿಕೆ ಶೇ 50% ರಷ್ಟು ಕೇಬಲ್ ಬದಲಾವಣೆ ಕಾಮಗಾರಿಯ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಮುಂದುವರೆದು ಅಧ್ಯಕ್ಷರು ಸಾರ್ವಜನಿಕರ ಕಟ್ಟಡಗಳ ಬಾಕಿ ಇರುವ ಬಿಲ್ಲಿವ ವಿವರವನ್ನು ನೀಡಲು ಸಭೆಯಲ್ಲಿ ಹಾಜರಿದ್ದ ಶ್ರೀ ಮುನಿರಾಜು ಬೆಸ್ಕಾಂ ಅಧಿಕಾರಿ ರವರಿಗೆ ತಿಳಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿನ 2022–23ರಲ್ಲಿ ಕೈಗೊಳ್ಳಬೇಕಾದ ಕಾಮಗಾರಿಗಳನ್ನು ಬಜೆಟ್‌ನಲ್ಲಿ ಅಳವಡಿಸಲು ಮಾನ್ಯ ಶಾಸಕರೊಂದಿಗೆ ಚರ್ಚಿಸಿದ್ದು, ಪ್ರಸ್ತಾವನೆಯನ್ನು ಸಿದ್ದಪಡಿಸಲಾಗುತ್ತದೆ ಎಂದು ಅಧ್ಯಕ್ಷರು ತಿಳಿಸಿರುತ್ತಾರೆ. ಫೆಬ್ರವರಿ ತಿಂಗಳಿನಲ್ಲಿ ವಾರ್ಡ್ ವ್ಯಾಪ್ತಿಯ ಎಲ್ಲಾ ರಸ್ತೆಗಳನ್ನು ಗುಂಡಿಮುಕ್ತ ಮಾಡುವ ಬಗ್ಗೆ ಶಾಸಕರೊಂದಿಗೆ ಪರಿವೀಕ್ಷಣೆ ಮಾಡಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳನ್ನು ಗುಂಡಿರಹಿತವಾಗಿ ಮತ್ತು ವಾಹನ ಸಂಚಾರಕ್ಕೆ ಯಾವುದೇ ತೊಂದರೆಯಾಗದಂತೆ ರಸ್ತೆಗಳನ್ನು ಸಜ್ಜುಗೊಳಿಸಲಾಗಿದೆ ಎಂದು ವಾರ್ಡ್ ಅಭಿಯಂತರರು ಸಭೆಗೆ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.